ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ
ಕಬ್ಬನ್ ಉದ್ಯಾನವನ, ಬೆಂಗಳೂರು – 560 001.

ನಂ.ಜಿಇಎ/433/2024 ದಿನಾಂಕ: 15-07-2024

## ಪತ್ರಿಕಾ ಪ್ರಕಟಣೆ ಕೃಪೆಗಾಗಿ

### ರಾಜ್ಯ ಸರ್ಕಾರಿ ನೌಕರರ ವೇತನ-ಭತ್ಯೆಗಳ ಪರಿಷ್ಕರಣೆಗೆ ರಚಿಸಿದ್ದ ರಾಜ್ಯ 7ನೇ ವೇತನ ಆಯೋಗವು ಮಾಡಿದ್ದ ಶಿಫಾರಸ್ಸು ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಲು ಇಂದು ರಾಜ್ಯ ಸಚಿವ ಸಂಪುಟದಲ್ಲಿ ಅನುಮೋದನೆ

ರಾಜ್ಯ 7ನೇ ವೇತನ ಆಯೋಗದ ವರದಿಯ ಶಿಫಾರಸ್ಸನ್ನು ಯಥಾವತ್ತಾಗಿ ಜಾರಿಗೊಳಿಸಲು ಅನುಮೋದನೆ ನೀಡಿರುವುದಕ್ಕಾಗಿ ಸಮಸ್ತ ರಾಜ್ಯ ಸರ್ಕಾರಿ ನೌಕರರ ಪರವಾಗಿ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸನ್ಮಾನ್ಯ ಸಿದ್ಧರಾಮಯ್ಯರವರಿಗೆ, ಸಚಿವ ಸಂಪುಟದ ಸಚಿವರುಗಳಿಗೆ ಹಾಗೂ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳಿಗೆ ಸಂಘವು ಧನ್ಯವಾದಗಳನ್ನು ಸಲ್ಲಿಸುತ್ತದೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ದಿನಾಂಕ: 01-7-2022 ರಿಂದ ಕಾಲ್ಪನಿಕವಾಗಿ ವೇತನ ನಿಗದಿ, ದಿನಾಂಕ: 01-08-2024 ರಿಂದ ಆರ್ಥಿಕ ಸೌಲಭ್ಯವನ್ನು ನೀಡಲು ಹಾಗೂ ವೇತನ ಆಯೋಗ ಶಿಫಾರಸ್ಸು ಮಾಡಿದ 27.50% ವೇತನ ವೇತನ ನಿಗದಿಗೆ ಇಂದು ನಡೆದ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಿರುತ್ತದೆ.

**ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಪ್ರಮುಖ ಬೇಡಿಕೆಗಳಾದ;**

1. **ರಾಜ್ಯ 7ನೇ ವೇತನ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಯಥಾವತ್ತಾಗಿ ಅನುಷ್ಠಾನಗೊಳಿಸಿ ಆದೇಶ ಹೊರಡಿಸುವುದು.**
2. **ಎನ್.ಪಿ.ಎಸ್. ರದ್ದುಪಡಿಸಿ ಹಳೇ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸುವುದು.**
3. **ಕರ್ನಾಟಕ ರಾಜ್ಯ ಆರೋಗ್ಯ ಸಂಜೀವಿನಿ ಯೋಜನೆ ಲೋಕಾರ್ಪಣೆ ಮಾಡುವುದು.**

ಮೇಲ್ಕಂಡ ಮೂರು ಬೇಡಿಕೆಗಳನ್ನು ಶೀಘ್ರ ಈಡೇರಿಸಿ ಆದೇಶ ಹೊರಡಿಸುವ ಸಂಬಂಧ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯು ದಿನಾಂಕ:07-07-2024ರಂದು ತೆಗೆದುಕೊಂಡ ಹೋರಾಟದ ತೀರ್ಮಾನದಂತೆ ಸಂಘವು ಸರ್ಕಾರಕ್ಕೆ ಒತ್ತಡ ತರಲು ಹಂತ-ಹಂತದ ಹೋರಾಟ ಕಾರ್ಯಕ್ರಮಗಳನ್ನು ರೂಪಿಸಿತ್ತು.

- ಸಂಘದ ಮತ್ತೊಂದು ಪ್ರಮುಖ ಬೇಡಿಕೆಯಾದ ನೂತನ ಪಿಂಚಣಿಯ ಯೋಜನೆಯನ್ನು ರದ್ದುಪಡಿಸಿ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸುವ ಬೇಡಿಕೆಯು ಇಂದಿನ ಸಚಿವ ಸಂಪುಟದ ಅನುಮೋದನೆಯಾಗುವ ನಿರೀಕ್ಷೆಯನ್ನು ಸಂಘವು ಹೊಂದಿತ್ತು.

..2

# ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ

ಕಬ್ಬನ್ ಉದ್ಯಾನವನ, ಬೆಂಗಳೂರು – 560 001.




- ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ನಗದುರಹಿತ ಉಚಿತ ಚಿಕಿತ್ಸೆ ನೀಡುವ ಆರೋಗ್ಯ ಸಂಜೀವಿನಿ ಯೋಜನೆಗೆ ಹಿಂದಿನ ಸರ್ಕಾರದ ಸಚಿವ ಸಂಪುಟ ಅನುಮೋದನೆ ನೀಡಿ 02 ವರ್ಷ ಪೂರ್ಣಗೊಂಡರೂ ಈವರೆಗೆ ಜಾರಿ ಆಗಿರುವುದಿಲ್ಲ.
- ಸಂಘದ ಪ್ರಮುಖ ಬೇಡಿಕೆಗಳಿಗೆ ಸಚಿವ ಸಂಪುಟದ ಅನುಮೋದನೆ ಹೊರತಾಗಿಯೂ ಮೂರು ಬೇಡಿಕೆಗಳಿಗೆ ಸಂಬಂಧಿಸಿದಂತೆ ಸರ್ಕಾರ ಕೂಡಲೇ ಆದೇಶ ಹೊರಡಿಸಿ ಜಾರಿಗೊಳಿಸುವ ನಿರೀಕ್ಷೆಯನ್ನು ಸಂಘವು ಹೊಂದಿದೆ.
- ಒಂದು ವೇಳೆ ಸರ್ಕಾರ ಆದೇಶ ಹೊರಡಿಸಲು ವಿಳಂಬ ಮಾಡಿದಲ್ಲಿ; ಸಂಘದ ಕಾರ್ಯಕಾರಿ ಸಮಿತಿ ನಿರ್ಣಯದಂತೆ ಹೋರಾಟದ 2ನೇ ಹಂತದ ಭಾಗವಾಗಿ ದಿನಾಂಕ: 23–07–2024 ರಂದು ರಾಜ್ಯದ ಎಲ್ಲಾ ಇಲಾಖೆಗಳು, ನಿಗಮ–ಮಂಡಳಿ,ಪ್ರಾಧಿಕಾರ, ವಿಶ್ವವಿದ್ಯಾಲಯಗಳು, ಸ್ಥಳೀಯ ಸಂಸ್ಥೆಗಳು, ಸ್ವಾಯತ್ತ ಸಂಸ್ಥೆ ಮತ್ತು ಅನುದಾನಿತ ಸಂಸ್ಥೆಗಳು ಹಾಗೂ ರಾಜ್ಯ ನಿವೃತ್ತ ನೌಕರರ ಸಂಘವೂ ಸೇರಿದಂತೆ ವೃಂದ ಸಂಘಗಳ ಸಭೆಯನ್ನು ಕರೆಯಲಾಗಿದ್ದು, ಈ ಸಭೆಯಲ್ಲಿ ಮುಂದಿನ ಹೋರಾಟದ ರೂಪು–ರೇಷೆಗಳ ಬಗ್ಗೆ ಚರ್ಚಿಸಲಾಗುವುದು.
- ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿನ ಪ್ರಮುಖ ಬೇಡಿಕೆಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಆದೇಶ ಹೊರಡಿಸದೇ ಇದ್ದಲ್ಲಿ ಅನಿವಾರ್ಯವಾಗಿ ದಿನಾಂಕ: 29–07–2024ರಿಂದ ಅನಿರ್ದಿಷ್ಟಾವದಿಯವರೆಗೆ ಕಚೇರಿ ಕರ್ತವ್ಯಕ್ಕೆ ಗೈರು ಹಾಜರಾಗುವ ಮೂಲಕ ಹೋರಾಟವನ್ನು ನಡೆಸಲಾಗುವುದು.
- ಸರ್ಕಾರವು; ರಾಜ್ಯ ಸರ್ಕಾರಿ ನೌಕರರು ಹೋರಾಟ ಮಾರ್ಗ ಹಿಡಿಯಲು ಅವಕಾಶ ಮಾಡಿಕೊಡದೆ ಸಂಘದ ಮೇಲ್ಕಂಡ ಬೇಡಿಕೆಗಳ ಕುರಿತಂತೆ ಸರ್ಕಾರಿ ಆದೇಶ ಹೊರಡಿಸುವಂತೆ ಸಂಘವು ಈ ಮೂಲಕ ಸರ್ಕಾರಕ್ಕೆ ಮತ್ತೊಮ್ಮೆ ಮನವಿ ಮಾಡುತ್ತದೆ.

**ಮೇಲ್ಕಂಡ ಪತ್ರಿಕಾ ಹೇಳಿಕೆಯನ್ನು ತಮ್ಮ ಪತ್ರಿಕೆಗಳಲ್ಲಿ ಪ್ರಕಟಿಸಿ ವ್ಯಾಪಕ ಪ್ರಚಾರಪಡಿಸಲು ಕೋರಿದೆ.**

(ಸಿ.ಎಸ್.ಷಡಾಕ್ಷರಿ)
ರಾಜ್ಯಾಧ್ಯಕ್ಷರು

**ಗೆ:**
**ಮಾನ್ಯ ಸಂಪಾದಕರು, _______________ ಪತ್ರಿಕೆ.**

: 080-22354784/83 : ksgea.bng@gmail.com : https://www.facebook.com/ksgeaofficial/